# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 984(1164)
**ಸದಸ್ಯರ ಹೆಸರು** : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರಯಿಂದ ಚುನಾಯಿತರಾದವರು)
**ಉತ್ತರಿಸುವ ದಿನಾಂಕ** : 07.03.2022
**ಉತ್ತರಿಸುವ ಸಚಿವರು** : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರವು ಅನುದಾನಿತ ಶಾಲಾ ಕಾಲೇಜುಗಳಲ್ಲಿ 2015 ಡಿಸೆಂಬರ್ ವರೆಗಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಆದೇಶ ಹೊರಡಿಸಲಾಗಿದೆ. | ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ದಿನಾಂಕ:31-12-2015ರವರೆಗೆ ವಿವಿಧ ಕಾರಣಗಳಿಂದ ತೆರವಾಗಿರುವ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ:25/09/2018 ಹಾಗೂ ಸರ್ಕಾರದ ಪತ್ರ: ದಿನಾಂಕ:23-07-2021ರಲ್ಲಿ ಭರ್ತಿ ಮಾಡಲು ಆದೇಶ ಹೊರಡಿಸಲಾಗಿದೆ. |
| ಆ | ಹೊರಡಿಸಿದ್ದಲ್ಲಿ, ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಹಾಗೂ ಇಲ್ಲಿಯವರೆಗೆ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿದೆ; ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;(ಶಾಲಾ ಕಾಲೇಜುವಾರು ಹುದ್ದೆಗಳ ಸಂಖ್ಯೆಯನ್ನು ಒದಗಿಸುವುದು) | **ಅನುದಾನಿತ ಪ್ರೌಢಶಾಲೆಗಳು:-** (see table below) |

**ಅನುದಾನಿತ ಪ್ರೌಢಶಾಲೆಗಳು:-**

| ಕ್ರ.ಸಂ. | ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ | ಅನುಮತಿ ನೀಡಲಾದ ಹುದ್ದೆಗಳ ಸಂಖ್ಯೆ | ಬಾಕಿ ಇರುವ ಹುದ್ದೆಗಳು |
|---|---|---|---|
| 1. | 2181 | 257 | 1924 |

ಅನುಮತಿ ನೀಡಲಾದ 257 ಹುದ್ದೆಗಳ ಪೈಕಿ 54 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಇನ್ನುಳಿದ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಪರಿಶೀಲನೆಯಲ್ಲಿರುತ್ತದೆ.

**ಅನುದಾನಿತ ಪದವಿಪೂರ್ವ ಕಾಲೇಜುಗಳು:-**

| ಕ್ರ.ಸಂ | ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ | ಅನುಮತಿ ನೀಡಲಾದ ಹುದ್ದೆಗಳ ಸಂಖ್ಯೆ | ಬಾಕಿ ಇರುವ ಹುದ್ದೆಗಳು |
|---|---|---|---|
| 1 | 998 | 323 | 675 |

ಬಾಕಿ ಇರುವ 675 ಹುದ್ದೆಗಳ ಪೈಕಿ 436 ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ಮಂಡಳಿಗಳು ಈವರೆಗೂ ಪ್ರಸ್ತಾವನೆಗಳನ್ನು ಸಲ್ಲಿಸಿರುವುದಿಲ್ಲ. ನಿರ್ದೇಶನಾಲಯದ ಹಂತದಲ್ಲಿ 239 ಹುದ್ದೆಗಳ ಪ್ರಸ್ತಾವನೆಗಳನ್ನು ವಿವಿಧ ಹಂತಗಳಲ್ಲಿ ಪರಿಶೀಲಿಸಲಾಗುತ್ತಿದೆ.

**(ಅನುಬಂಧ-1)**

| | | |
|---|---|---|
| ಇ | ಆರ್ಥಿಕ ಇಲಾಖೆಯು ಕೋವಿಡ್-19 ಸಮಸ್ಯೆಯ ಹಿನ್ನೆಲೆ ಆರ್ಥಿಕ ಮಿತವ್ಯಯದ ಆದೇಶವನ್ನು ಸಡಿಲಗೊಳಿಸಿದ ಸಂದರ್ಭದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿದ ಹುದ್ದೆಗಳ ಸಂಖ್ಯೆ ಎಷ್ಟು; | ಈ ಹುದ್ದೆಗಳನ್ನು ಭರ್ತಿ ಮಾಡಲು 257 ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು ದಿನಾಂಕ:23-02-2021ರಲ್ಲಿ 257 ಪ್ರಸ್ತಾವನೆ ಎಂಬುದರ ಬದಲಾಗಿ 257 ಬೋಧಕ ಹುದ್ದೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜಿನ 173 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡಿರುತ್ತದೆ. |
| ಈ | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಹುದ್ದೆಗಳ ಮಾಹಿತಿಗೂ ಆರ್ಥಿಕ ಇಲಾಖೆಯು ಅನುಮತಿ ನೀಡಿದ ಹುದ್ದೆಗಳ ಮಾಹಿತಿಗೂ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ವ್ಯತ್ಯಾಸಕ್ಕೆ ಕಾರಣಗಳೇನು; ಹಾಗೂ ಕ್ರೂಢೀಕೃತ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ? (ಮಾಹಿತಿ ನೀಡುವುದು) | ಗಮನಕ್ಕೆ ಬಂದಿದೆ,<br><br>ಒಟ್ಟು 257 ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು ದಿನಾಂಕ: 23-02-2021ರಲ್ಲಿ 257 ಪ್ರಸ್ತಾವನೆ ಎಂಬುದರ ಬದಲಾಗಿ 257 ಬೋಧಕ ಹುದ್ದೆಗಳನ್ನು ಎಂದು ಪರಿಗಣಿಸಿ ಭರ್ತಿ ಮಾಡಿಕೊಳ್ಳಲು ಸಹಮತಿ ನೀಡಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ದಿನಾಂಕ:31-12-2015 ರವರೆಗೆ ವಿವಿಧ ಕಾರಣಗಳಿಂದ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪುನಃ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

ಇಪಿ 86 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು